ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No:DTE-ADMI0ACM2/110/2021

ಆಯುಕ್ತರ ಕಛೇರಿ.
ತಾಂತ್ರಿಕ ಶಿಕ್ಷಣ ಇಲಾಖೆ.
,ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:16-10-2021.

**-:: ಸುತ್ತೋಲೆ ::-**

ವಿಷಯ: 2021-22ನೇ ಸಾಲಿನ ಅರೆಕಾಲಿಕ (ಪಾರ್ಟ್-ಟೈಮ್) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಅರ್ಜಿಗಳನ್ನು ಸ್ವೀಕರಿಸುವ ಸಂಬಂಧ ಪ್ರವೇಶ ಅವಧಿ ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:04-09-2021..
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:22-09-202.
3. ಪ್ರಾಂಶುಪಾಲರು, ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಸ್‌ಜೆಪಿ(ಪಿಟಿಡಿ)/01/ಪ್ರವೇಶ/2021, ದಿ:11-10-2021.

-*******-

2021-22ನೇ ಸಾಲಿನ ಅರೆಕಾಲಿಕ (ಪಾರ್ಟ್-ಟೈಮ್) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ ಉಲ್ಲೇಖ(3)ರ ಪ್ರಾಂಶುಪಾಲರ ಪತ್ರದಲ್ಲಿ ಉಳಿಕೆಯಾಗಿರುವ ಸೀಟುಗಳನ್ನು ಭರ್ತಿ ಮಾಡಲು ಪ್ರವೇಶದ ಅವಧಿಯನ್ನು ವಿಸ್ತರಿಸಲು ಮನವಿ ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಾಂಶುಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಸ್ವೀಕರಿಸಿ ನಿಯಮಗಳ ಪ್ರಕಾರ **ದಿ:30-10-2021 ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ತಮ್ಮ ಹಂತದಲ್ಲಿಯೇ ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

**ಭರ್ತಿ ಆಗದ ಉಳಿಕೆ ಸೀಟುಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ಬಯಸಿ ಮೊದಲು ಬಂದವರಿಗೆ ಮೊದಲ ಆಧ್ಯತೆ ನೀಡಿ ಆಯಾ ದಿನವೇ ಸಾಮಾನ್ಯ ವರ್ಗದಡಿ ಸೀಟು ಹಂಚಿಕೆ ಮಾಡಿ, ನಿಗಧಿತ ಪ್ರವೇಶ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.**

ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಗೆ,
1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು
3. ಪ್ರಿನ್ಸಿಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು

- ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು.

Scanned with CamScanner

**ಪ್ರತಿ ಮಾಹಿತಿಗಾಗಿ:-**

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ.
4) ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ.
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6) ಎಸ್‌ಟಿಎಲ್, ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ.ಆರ್.ಎಸ್ ವಿಭಾಗಕ್ಕೆ – ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ [illegible] ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
8) ಇ-ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
9) ಕಡತಕ್ಕೆ.

Scanned with CamScanner